ಸಂಖ್ಯೆ		ಕ್ರೈಂಗಳ ಸಂಖ್ಯೆ
01	2008	58
02	2009	97
03	2010 (27.6.10ರ ವರೆಗೆ)	16
	ಒಟ್ಟು	171

(ಆ) ವ್ಯವಸ್ಥಿತ ಕಾರ್ಯಾಲಯವನ್ನು ಇಲಾಖೆಯು ಹೊಂದಿರುತ್ತದೆ. ಸೈಬರ್ ಪೊಲೀಸ್ ಠಾಣೆಗೆ ಹೊಂದಿಕೊಂಡಿರುವಂತೆ ಸೈಬರ್ ಲ್ಯಾಬನ್ನು ಸ್ಥಾಪಿಸಿ ನುರಿತ ಸಿಬ್ಬಂದಿಯವರಿಂದ ತಂತ್ರಜ್ಞಾನವನ್ನು ತನಿಖೆಯಲ್ಲಿ ಪಡೆಯಲಾಗುತ್ತಿದೆ.

(ಇ) ಮಾಹಿತಿ ತಂತ್ರಜ್ಞಾನ ತಿದ್ದುಪಡಿ ಕಾಯಿದೆ 2008ರ ಅಡಿಯಲ್ಲಿ ಸೈಬರ್ ಅಪರಾಧಗಳನ್ನು ಸೈಬರ್ ಪೊಲೀಸ್ ಠಾಣೆಯಲ್ಲಿ ದಾಖಲು ಮಾಡಿ ತನಿಖೆ ಮಾಡುವುದರ ಜೊತೆಗೆ ರಾಜ್ಯದ ಎಲ್ಲಾ ಪೊಲೀಸ್ ನಿರೀಕ್ಷಕರು ಕಲಂ 78 ಮಾಹಿತಿ ತಂತ್ರಜ್ಞಾನ ಕಾಯಿದೆ 2008ರ ಪ್ರಕಾರ ಪ್ರಕರಣ ದಾಖಲು ಮಾಡಿ ತನಿಖೆ ನಡೆಸಲಾಗುತ್ತಿದೆ.

(ಈ) ಅಪರಾಧಗಳನ್ನು ಪತ್ತೆ ಹಚ್ಚಲು ಪೊಲೀಸರು ಕಾನೂನು ಬದ್ಧವಾದ ಎಲ್ಲಾ ವಿಧವಾದ ವಿಧಾನಗಳನ್ನು ಅನುಸರಿಸಿ ಅಪರಾಧಗಳನ್ನು ಪತ್ತೆ ಹಚ್ಚಲು ಕ್ರಮ ತೆಗೆದುಕೊಳ್ಳುತ್ತಾರೆ.

ರೈಲ್ವೆ ಮಾರ್ಗಗಳ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವುದು

337 (420) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ):–ಪ್ರವಾಸೋದ್ಯಮ ಹಾಗೂ ಮೂಲಸೌಲಭ್ಯ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಮುನಿರಾಬಾದ್–ಮೆಹಬೂಬ ನಗರ ರೈಲ್ವೆ ಮಾರ್ಗಕ್ಕಾಗಿ ಸರ್ಕಾರ ಭೂಮಿಯನ್ನು ಸ್ವಾಧೀನಪಡಿಸಿಕೊಂಡಿದೆಯೇ;

ಆ) ಹಾಗಿದ್ದಲ್ಲಿ, ಯಾವ ಪ್ರದೇಶದಲ್ಲಿ ಮತ್ತು ಎಷ್ಟು ಪ್ರಮಾಣದ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ (ವಿವರಗಳನ್ನು ನೀಡುವುದು)

ಇ) ಮುನಿರಾಬಾದ್–ಮೆಹಬೂಬ ನಗರ ರೈಲ್ವೆ ಮಾರ್ಗದ ಕಾಮಗಾರಿಯು ಪ್ರಾರಂಭವಾಗಿದೆಯೇ ;

ಈ) ಮುನಿರಾಬಾದ್–ಮೆಹಬೂಬ್ ನಗರ ರೈಲ್ವೆ ಮಾರ್ಗಕ್ಕಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ನಿಗದಿಪಡಿಸಿರುವ ಅನುದಾನದ ವೊತ್ತವೆಷ್ಟು (ವಿವರಗಳನ್ನು ನೀಡುವುದು)

ಉ) ಮುನಿರಾಬಾದ್–ಮೆಹಬೂಬ್ ನಗರ ರೈಲ್ವೆ ಮಾರ್ಗದ ಕಾಮಗಾರಿಯನ್ನು ತ್ವರಿತವಾಗಿ ಕೈಗೆತ್ತಿಕೊಳ್ಳಲಾಗುವುದೇ;

ಊ) ಮುನಿರಾಬಾದ್–ಮೆಹಬೂಬ್‌ನಗರ ರೈಲ್ವೆ ಮಾರ್ಗದ ಕಾಮಗಾರಿಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಈವರೆವಿಗೂ ಮಾಡಿರುವ ವೆಚ್ಚವೆಷ್ಟು (ವಿವರಗಳನ್ನು ನೀಡುವುದು).

ಶ್ರೀ ಜನಾರ್ದನರೆಡ್ಡಿ (ಪ್ರವಾಸೋದ್ಯಮ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು):–

ಅ) ಹೌದು, ಸದರಿ ಮಾರ್ಗಕ್ಕೆ ಅಗತ್ಯವಾಗಿ ಬೇಕಾಗಿರುವ ಭೂಮಿಯನ್ನು ಸ್ವಾಧೀನಪಡಿಸಲು ಕ್ರಮ ವಹಿಸಲಾಗುತ್ತಿದೆ.

ಆ)

ಕ್ರ.ಸಂ.	ತಾಲ್ಲೂಕು	ಎಕರೆ–ಗುಂಟೆ
1	ಕೊಪ್ಪಳ, ದನಗಲದೊಡ್ಡಿ, ಅಮರಾಪುರ ಮತ್ತು ಬೂದಗುಂಪಾ, ಗಿಣಿಗೇರಾ, ಕನಕಾಪುರ, ರುದ್ರಾಪುರ, ಲಿಂಗದಳ್ಳಿ, ಗುಳದಳ್ಳಿ, ಇಂದರಗಿ ಮತ್ತು ಜಬ್ಬಲಗುಡ್ಡ	51–25
	ಒಟ್ಟು	98–27
2	ಗಂಗಾವತಿ ಮುಕ್ಕುಂಪಿ ಮತ್ತು ಇತರ 19 ಗ್ರಾಮಗಳು	672–07 ಈ ಜಮೀನಿಗೆ ಸಂಬಂಧಪಟ್ಟಂತೆ 6(1)ರಡಿ ಅಧಿಸೂಚನೆಯನ್ನು ಹೊರಡಿಸಲು ಕ್ರಮವಹಿಸಲಾಗುತ್ತಿದೆ.
3	ಸಿಂಧನೂರು ಚನ್ನಳ್ಳ ಮತ್ತು ಇತರ 6 ಗ್ರಾಮಗಳು	209–13 ಈ ಜಮಿನುಗಳಿಗೆ ಸಂಬಂಧಿಸಿದಂತೆ 4(1)ರ ಅಧಿಸೂಚನೆಯನ್ನು ಹೊರಡಿಸಲು ಕ್ರಮವಹಿಸಲಾಗುತ್ತಿದೆ.
4	ರಾಯಚೂರು ಹೊಸೂರು ಮತ್ತು ಮಮದಾಪುರ	63–15 ಭೂಸ್ವಾಧೀನ ಪ್ರಕ್ರಿಯೆ ಪೂರ್ಣ ಗೊಂಡಿದೆ.
5	ಮಾನ್ವಿ	ರೈಲ್ವೆ ಇಲಾಖೆಯಿಂದ ಪ್ರಸ್ತಾವನೆಯನ್ನು ನಿರೀಕ್ಷಿಸಲಾಗುತ್ತಿದೆ.

ಇ) ಮುನಿರಾಬಾದ್–ಮೆಹಬೂಬ್‌ನಗರ ಹೊಸ ರೈಲು ಮಾರ್ಗದ ಕಾಮಗಾರಿಯು ಪ್ರಗತಿಯಲ್ಲಿದೆ.

ಈ) 2010–11 ನೇ ಸಾಲಿನ ಕೇಂದ್ರ ರೈಲ್ವೆ ಆಯವ್ಯಯದಲ್ಲಿ ಸದರಿ ಮಾರ್ಗಕ್ಕೆ ರೂ. 30.00 ಕೋಟಿಯನ್ನು ಒದಗಣೆ ಮಾಡಿದೆ. ರಾಜ್ಯ ಸರ್ಕಾರವು ಸಹ ಹೊಸ ವೆಚ್ಚ ಹಂಚಿಕೆ ಯೋಜನೆಗಳಿಗಾಗಿ 100 ಕೋಟಿಯನ್ನು ಒದಗಣೆ ಮಾಡಿದೆ.

ಉ) ಸದರಿ ಮಾರ್ಗದ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ.

ಊ) ಮುನಿರಾಬಾದ್–ಮೆಹಬೂಬ್ ನಗರ ರೈಲ್ವೆ ಮಾರ್ಗದ ಕಾಮಗಾರಿಗೆ ರಾಜ್ಯ ಸರ್ಕಾರವು ಇದುವರೆಗೆ ರೂ. 15.00 ಕೋಟಿಯನ್ನು ಬಿಡುಗಡೆ ಮಾಡಿದೆ ಹಾಗೂ ರೈಲ್ವೆ ಇಲಾಖೆಯು ರೂ. 9.10 ಕೋಟಿಯನ್ನು ಬಿಡುಗಡೆ ಮಾಡಿದ್ದು, ಒಟ್ಟಾರೆ ಈ ಮಾರ್ಗಕ್ಕೆ ಇದುವರೆಗೆ ರೂ. 18.20 ಕೋಟಿಯನ್ನು ವೆಚ್ಚ ಮಾಡಲಾಗಿದೆ.

ಪ್ರವಾಸೋದ್ಯಮ ಕಾರ್ಯಕ್ರಮ

338 (919) ಶ್ರೀ ಖಾದರ್ ಯು.ಟಿ. (ಮಂಗಳೂರು):–ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ದಕ್ಷಿಣ ಕನ್ನಡ ಜಿಲ್ಲೆಗೆ ಪ್ರವಾಸಿಗರನ್ನು ಆಕರ್ಷಿಸಲು ಇಲಾಖೆ ಯಾವುದಾದರೂ ಹೊಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆಯೇ;

ಆ) ಹಾಗಿದ್ದಲ್ಲಿ, ಈ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಜಿ. ಜನಾರ್ದನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು):–

ಅ) ದಕ್ಷಿಣ ಕನ್ನಡ ಜಿಲ್ಲೆಗೆ ಹೆಚ್ಚಿನ ಪ್ರವಾಸಿಗರನ್ನು ಆಕರ್ಷಿಸುವ ಸಲುವಾಗಿ ಇಲಾಖೆಯು ಈ ಕೆಳಗಿನ ನೂತನ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುತ್ತದೆ.

1. ಈಗಾಗಲೇ ಪ್ರಸಿದ್ಧಿಯಾಗಿರುವ ಪಿಲಿಕುಳ ನಿಸರ್ಗಧಾಮಕ್ಕೆ ಇನ್ನೂ ಹೆಚ್ಚಿನ ಪ್ರವಾಸಿಗರನ್ನು ಆಕರ್ಷಿಸಲು ಹೆಚ್ಚುವರಿ ಸೌಲಭ್ಯಗಳಾದ ಕಂಬಳ ಕ್ರೀಡಾ ಪ್ರದೇಶ ಅಭಿವೃದ್ಧಿ, ಪರಂಪರಾ ಗ್ರಾಮ ಜೋಡಣೆ, ಆಯುರ್ವೇದ ಚಿಕಿತ್ಸಾ ಸೌಲಭ್ಯ, ಸಂಸ್ಕೃತಿ ಗ್ರಾಮ ಹಾಗೂ ವನ್ಯ ಪ್ರಾಣಿ ವಿಭಾಗ, ಗಾಲ್ಫ್‌ಕೋರ್ಸ್ ಅಭಿವೃದ್ಧಿ ಮುಂತಾದ ಸೌಲಭ್ಯಗಳನ್ನು ಅಳವಡಿಸಿ ಅಭಿವೃದ್ಧಿಪಡಿಸಲಾಗುತ್ತಿದೆ.

2. ಸುಲ್ತಾನ್ ಬತ್ತೇರಿಯಿಂದ ತಣ್ಣೀರು ಬಾವಿವರೆಗೆ ತೂಗು ಸೇತುವೆ ನಿರ್ಮಾಣ ಮಾಡುವ ಯೋಜನೆ ಹಮ್ಮಿಕೊಳ್ಳಲಾಗಿದೆ.

3. ಕಟೀಲು ದುರ್ಗಾಪರಮೇಶ್ವರಿ ದೇವಸ್ಥಾನದ ಬಳಿ ಯಾತ್ರಿ ನಿವಾಸ ನಿರ್ಮಿಸಲಾಗುತ್ತಿದೆ.